ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 12/12/2019

# ನಾಸಾ ವಿಜ್ಞಾನಿ ನವರತ್ನ ರಾಜಾರಾಮ್ ಇನ್ನಿಲ್ಲ

▪ **ವಿಕ ಸುದ್ದಿಲೋಕ** ಬೆಂಗಳೂರು

ನಾಸಾ ಸಂಸ್ಥೆಯ ನಿವೃತ್ತ ವಿಜ್ಞಾನಿ ಡಾ.ನವರತ್ನ ಶ್ರೀನಿವಾಸ ರಾಜಾರಾಮ್ (76) ಅವರು ಬುಧವಾರ ಬೆಳಗ್ಗೆ ಬೆಂಗಳೂರಿನಲ್ಲಿ ನಿಧನರಾದರು.

ಅವಿವಾಹಿತರಾಗಿದ್ದ ರಾಜಾರಾಮ್ ಅವರು ಎರಡು ವರ್ಷಗಳಿಂದ ನಗರದ ಚಿಕ್ಕಬಾಣಾವರದಲ್ಲಿ ವಾಸವಾಗಿದ್ದರು. ಅನಾರೋಗ್ಯ ಕಂಡು ಬಂದ ಹಿನ್ನೆಲೆಯಲ್ಲಿ ಹೆಸರುಘಟ್ಟ ರಸ್ತೆಯಲ್ಲಿರುವ ಸಪ್ತಗಿರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿ ಅವರು ಕೊನೆಯುಸಿರೆಳೆದರು. ಗುರುವಾರ ಮಧ್ಯಾಹ್ನ 12 ಗಂಟೆಗೆ ಬನಶಂಕರಿಯ ಚಿತಾಗಾರದಲ್ಲಿ ಅವರ ಅಂತ್ಯಸಂಸ್ಕಾರ ನೆರವೇರಲಿದೆ.

1943ರಲ್ಲಿ ಮೈಸೂರಿನಲ್ಲಿ ಜನಿಸಿದ ರಾಜಾರಾಮ್ ಅವರು, ಮೈಸೂರು ಹಾಗೂ ಬೆಂಗಳೂರಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಪಡೆದರು. ಬೆಂಗಳೂರಿನಲ್ಲಿ



ಎಂಜಿನಿಯರಿಂಗ್ ವ್ಯಾಸಂಗ ಮುಗಿಸಿದ ಬಳಿಕ ಪುಣೆಯಲ್ಲಿ ಖಾಸಗಿ ಕಂಪನಿಯಲ್ಲಿ ಕಾರ್ಯನಿರ್ವಹಿಸಿದ್ದರು. ನಂತರ ಅಮೆರಿಕಕ್ಕೆ ತೆರಳಿ ಇಂಡಿಯಾನಾ ವಿಶ್ವವಿದ್ಯಾಲಯದಲ್ಲಿ ಗಣಿತ ವಿಷಯದಲ್ಲಿ ಪಿಎಚ್‌ಡಿ ಮಾಡಿದ್ದರು. ಜತೆಗೆ ಅಮೆರಿಕದ ವಿಶ್ವವಿದ್ಯಾಲಯಗಳಲ್ಲಿ ಸುಮಾರು 20 ವರ್ಷಗಳ ಕಾಲ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದ್ದರು. ನಾಸಾದಲ್ಲಿ ವಿಜ್ಞಾನಿಯಾಗಿ ಸೇವೆ ಸಲ್ಲಿಸಿದ ಬಳಿಕ ಭಾರತದ ಇತಿಹಾಸ ಕುರಿತು ಅಧ್ಯಯನ ಮಾಡಿ ಹಲವು ಪುಸ್ತಕಗಳನ್ನು ಬರೆದಿದ್ದರು.

ಈ ನಡುವೆ, ಕೃತಕ ಬುದ್ಧಿಮತ್ತೆ ಕುರಿತು ಅವರು ಅಧ್ಯಯನ ಮಾಡಿ ಪುಸ್ತಕಗಳನ್ನು ಬರೆದಿದ್ದರು. ಕೃತಕ ಬುದ್ಧಿಮತ್ತೆಯನ್ನು ಹೇಗೆ ಬಳಸಿಕೊಳ್ಳಬಹುದೆಂಬ ಬಗ್ಗೆ ನಾಸಾಗೂ ಸಲಹೆಗಳನ್ನು ನೀಡಿದ್ದರು.

**ಪ್ರೊಫೈಲ್ಸ್ ಇನ್ ಡಿಸೆಪ್ಶನ್:** ಅಯೋಧ್ಯ, ಆ್ಯಂಡ್ ದಿ ಡೆಡ್ ಸೀ ಸ್ಕ್ರಾಲ್ಸ್, ರಾಷ್ಟ್ರಚಿಂತನ ತರಂಗಗಳು, ನ್ಯಾಷನಲಿಸಂ ಆ್ಯಂಡ್ ಡಿಸ್ಟಾರ್ಶನ್ಸ್ ಇನ್ ಇಂಡಿಯನ್ ಹಿಸ್ಟರಿ, ಇತಿಹಾಸ ಸಂಸ್ಕೃತಿ ಮತ್ತು ರಾಷ್ಟ್ರೀಯತೆ ಸೇರಿದಂತೆ ಹಲವಾರು ಪುಸ್ತಕಗಳನ್ನು ಅವರು ಬರೆದಿದ್ದಾರೆ. ಕನ್ನಡದ ಹಿರಿಯ ಸಾಹಿತಿ ನವರತ್ನ ರಾಮರಾವ್ ಅವರ ಮೊಮ್ಮಗರಾಗಿದ್ದ ಅವರು ಇತಿಹಾಸ, ರಾಷ್ಟ್ರೀಯತೆ, ಸಾಹಿತ್ಯ ಹಾಗೂ ವಿಜ್ಞಾನದಲ್ಲಿ ಹೆಚ್ಚು ಆಸಕ್ತಿ ಹೊಂದಿದ್ದರು.